4) ಈ ರೀತಿ ಪದೆ ಪದೇ ಬದಲಾಯಿಸಲು ಕಾರಣವೇನು ;

5) ಇದರಿಂದ ಅಧಿಕಾರಿಗಳ ಆಡಳಿತ ಸ್ಥೈರ್ಯ ಕುಸಿಯುವುದಿಲ್ಲವೇ ?

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು)

1) ಒಟ್ಟು 2

2) ಒಬ್ಬರು

3) ಅನುಬಂಧದಲ್ಲಿ ವಿವರಿಸಲಾಗಿದೆ

4) ಸಾರ್ವಜನಿಕ ಹಿತದೃಷ್ಟಿಯಿಂದ

5) ಆಡಳಿತಾತ್ಮಕ ಹಿತದೃಷ್ಟಿಯಿಂದ ವರ್ಗಾವಣೆಗಳನ್ನು ಮಾಡಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಉಡುಪಿ ಜಿಲ್ಲೆಯಲ್ಲಿ ರಾಜ್ಯವಲಯ ಯೋಜನೆಗಳ ಅನುಷ್ಠಾನ

251 (425) ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ) - ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯವಲಯ ಯೋಜನೆಗಳಿಗೆ ಸಂಬಂಧಿಸಿದಂತೆ, ಶಾಸಕರೊಡನೆ ಸಮಾಲೋಚಿಸಿ, ಶಾಲಾ ಕೊಠಡಿ ರಚನೆ, ರಿಪೇರಿ, ಶೌಚಾಲಯ ನಿರ್ಮಾಣ, ಪೀಠೋಪಕರಣ ಮತ್ತು ಪಿಠೋಪಕರಣಗಳ ಖರೀದಿಗೆ, ಜಿಲ್ಲಾ ಪಂಚಾಯತ್ ಅನುಮೋದನೆ ಪಡೆಯಲು ಜಿಲ್ಲಾ ಉಪನಿರ್ದೇಶಕರಿಗೆ ನಿರ್ದೇಶನ ನೀಡಲಾಗಿದೆಯೆ ;

ಆ) ಹೌದಾದಲ್ಲಿ, ಉಡುಪಿ ಜಿಲ್ಲಾ ಪಂಚಾಯತ್‌ನಲ್ಲಿ ರಾಜ್ಯವಲಯ ಯೋಜನೆಯಲ್ಲಿ ಶಾಸಕರು ಅವಶ್ಯಕತೆಗನುಗುಣವಾಗಿ ಸೂಚಿಸಿದ ಹೆಸರುಗಳನ್ನು ಬದಲಾಯಿಸುವುದೇಕೆ ; ಈ ರೀತಿಯ ಬದಲಾವಣೆ ಮಾಡುವುದಾದಲ್ಲಿ ಶಾಸಕರ ಜೊತೆ ಸಮಾಲೋಚನೆ ಅಗತ್ಯವಿದೆಯೆಂದು ಸರ್ಕಾರ ಭಾವಿಸಿದೆಯೆ ;

ಇ) ಈ ಬಗ್ಗೆ ಸರ್ಕಾರದ ನಿಲುವೇನು ?

ಪ್ರೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಆ ತರಹದ ಯಾವುದೇ ಸೂಚನೆಯನ್ನು ನೀಡಿರುವುದಿಲ್ಲ. ಆದರೆ ಜಿಲ್ಲಾಪಂಚಾಯತ್‌ನಲ್ಲಿ ಶಿಕ್ಷಣಕ್ಕೆ ಸಂಬಂಧಿಸಿದ ಯಾವುದೇ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಮುನ್ನ ಜಿಲ್ಲಾಪಂಚಾಯತ್‌ನ ಶಿಕ್ಷಣ ಸ್ಥಾಯಿ ಸಮಿತಿ ಸಭೆ / ಸಾಮಾನ್ಯ ಸಭೆಗಳಲ್ಲಿ ಅನುಮೋದನೆ ಪಡೆಯಬೇಕಾಗುತ್ತದೆ.

ಆ) ರಾಜ್ಯ ವಲಯ ಯೋಜನೆಯಡಿಯಲ್ಲಿ ಶಾಲಾ ಕೊಠಡಿ ರಚನೆ, ರಿಪೇರಿ, ಶೌಚಾಲಯ ನಿರ್ಮಾಣ, ಪೀಠೋಪಕರಣ ಮತ್ತು ಪೀಠೋಪಕರಣಗಳ ಖರೀದಿಗೆ ಪ್ರಸ್ತಾವನೆಯನ್ನು ಸಂಬಂಧಪಟ್ಟ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಸಕರ ಹಾಗೂ ಜನ ಪ್ರತಿನಿಧಿಗಳೊಂದಿಗೆ ಸಮಾಲೋಚಿಸಿ ಆಯ್ಕೆ ಮಾಡಿದ ಪಟ್ಟಿಯನ್ನು ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಸಲ್ಲಿಸಲಾಗುವುದು, ಕ್ಷೇತ್ರ ಶಿಕ್ಷಾಧಿಕಾರಿಗಳಿಂದ ಬಂದ ಪ್ರಸ್ತಾವನೆಯನ್ನು ಕ್ರೋಢೀಕರಿಸಿ ಜಿಲ್ಲಾ ಪಂಚಾಯತ್‌ನ ಸಾಮಾನ್ಯ ಸಭೆಯ ಅನುಮೋದನೆಗೆ ಸಲ್ಲಿಸಲಾಗುವುದು, ಜಿಲ್ಲಾಪಂಚಾಯತ್‌ನಿಂದ ಅನುಮೋದನೆಗೊಂಡ ಶಾಲೆಗಳಿಗೆ ನೀಡಲಾಗುವುದು.

ಇ) ರಾಜ್ಯ ವಲಯ ಯೋಜನೆಯಡಿಯಲ್ಲಿ ಶಾಲಾ ಕೊಠಡಿ ರಚನೆ, ರಿಪೇರಿ, ಶೌಚಾಲಯ ನಿರ್ಮಾಣ, ಪೀಠೋಪಕರಣ ಮತ್ತು ಪೀಠೋಪಕರಣಗಳ ಖರೀದಿಗೆ ಪ್ರಸ್ತಾವನೆಯನ್ನು ಸಂಬಂಧಪಟ್ಟ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಸಕರ ಹಾಗೂ ಜನ ಪ್ರತಿನಿಧಿಗಳೊಂದಿಗೆ ಸಮಾಲೋಚಿಸಿ ಆಯ್ಕೆ ಮಾಡಿದ ಪಟ್ಟಿಯಲ್ಲಿ ಜಿಲ್ಲಾಪಂಚಾಯತ್‌ನಿಂದ ಅನುಮೋದನೆಗೊಂಡ ಶಾಲೆಗಳಲ್ಲಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಬೇಕೆಂಬುದು ಸರ್ಕಾರದ ನಿಲುವಾಗಿರುತ್ತದೆ.

ಹಾಸನ ವಿಧಾನಸಭಾ ಕ್ಷೇತ್ರದಲ್ಲಿ ಕುಡಿಯುವ ನೀರಿನ ಸೌಕರ್ಯ

252 (420) ಶ್ರೀ ಹನುಮೇಗೌಡ ಕೆ.ಹೆಚ್. (ಹಾಸನ) - ಮಾನ್ಯ ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹಾಸನ ವಿಧಾನಸಭಾ ಕ್ಷೇತ್ರದ ಹಲವಾರು ಗ್ರಾಮಗಳಲ್ಲಿ ಕೊಳವೆ ಬಾವಿಗಳು ಬತ್ತಿಹೋಗಿ ಕುಡಿಯುವ ನೀರಿಗೆ ಹಾಹಾಕಾರ ಬಂದಿರುವುದು ನಿಜವಲ್ಲವೇ ;

ಆ) ಅತಿ ಅವಶ್ಯಕವಾಗಿ ಬೇಕಾಗಿರುವ ಬೋರ್‌ವೆಲ್‌ಗಳ ಪಟ್ಟಿ ನೀಡಿ, ಮಾನ್ಯ ರಾಜ್ಯ ಸಚಿವರು ಬೋರ್‌ವೆಲ್‌ಗಳನ್ನು ಕೊರೆಸುವಂತೆ ತಿಳಿಸಿದ್ದರೂ ಸಹ ಈ ತನಕ ಹಾಸನ ಜಿಲ್ಲಾ ಪಂಚಾಯತ್‌ನವರು ಕ್ರಮ ಕೈಗೊಳ್ಳದಿರಲು ಕಾರಣವೇನು ;

ಇ) ಈ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಕೆ.ಬಿ. ಕೋಳಿವಾಡ್ (ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು)

ಅ) ಹಾಸನ ವಿಧಾನಸಭಾ ಕ್ಷೇತ್ರದ ಕೆಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದ್ದು, ಸದರಿ ಕ್ಷೇತ್ರದಲ್ಲಿಯ ಹಾಲಿ ಕೊಳವೆ ಬಾವಿಗಳನ್ನು ಮತ್ತು ಕುಡಿಯುವ ನೀರಿನ ಯೋಜನೆಗಳನ್ನು ಪುನಶ್ಚೇತನಗೊಳಿಸುವ ಮೂಲಕ ಸಾಕಷ್ಟು ಮಟ್ಟಿಗೆ ಸಮಸ್ಯೆಯನ್ನು ಪರಿಹರಿಸಲು ಕ್ರಮ ಕೈಗೊಳ್ಳಲಾಗಿದೆ.

ಆ) ಹಾಸನ ಜಿಲ್ಲಾ ಪಂಚಾಯತಿಯು 5 ಗ್ರಾಮಗಳಲ್ಲಿ ಹೊಸ ಕೊಳವೆ ಬಾವಿಗಳನ್ನು ಕೊರೆಯಲು ಕ್ರಮ ತೆಗೆದುಕೊಳ್ಳುತ್ತಿದೆ.

ಇ) ಅನ್ವಯಿಸುವುದಿಲ್ಲ.

ಹಾಸನ ಜಿಲ್ಲೆಯಲ್ಲಿ ಗ್ರಾಮೀಣ ವಸತಿ ಯೋಜನೆಯಡಿ ಮನೆಗಳ ಮಂಜೂರಾತಿ

253 (421) ಶ್ರೀ ಹನುಮೇಗೌಡ ಕೆ.ಹೆಚ್. (ಹಾಸನ) - ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹಾಸನ ಜಿಲ್ಲೆಗೆ ಗ್ರಾಮೀಣ ವಸತಿ ಯೋಜನೆಯಡಿಯಲ್ಲಿ ವಿಧಾನಸಭಾ ಕ್ಷೇತ್ರವಾರು 2002-2003ನೇ ಸಾಲಿನಲ್ಲಿ ಎಷ್ಟೆಷ್ಟು ಮನೆಗಳು ಮಂಜೂರಾಗಿವೆ ; (ವಿವರ ಒದಗಿಸುವುದು) ;

ಆ) ಹಾಸನ ವಿಧಾನಸಭಾ ಕ್ಷೇತ್ರಕ್ಕೆ ಮನೆಗಳು ಕಡಿಮೆ ಪ್ರಮಾಣದಲ್ಲಿ ಮಂಜೂರಾಗಲು ಕಾರಣವೇನು ?

ಶ್ರೀ ಸಿ.ಆರ್. ಸಗೀರ್ ಅಹಮದ್ (ವಸತಿ ಸಚಿವರು)

ಅ) ಒಟ್ಟು 8955 ಮನೆಗಳನ್ನು ಮಂಜೂರು ಮಾಡಲಾಗಿದೆ. ಕ್ಷೇತ್ರವಾರು ವಿವರಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.